ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ ದಿನಾಂಕ : DATE : 11/04/2019

# ವಿನಯ ಕುಲಕರ್ಣಿ ವಿರುದ್ಧ ಎಫ್‌ಐಆರ್

**ಧಾರವಾಡ:** ಜಿಪಂ ಸದಸ್ಯ ಯೋಗೀಶಗೌಡ ಹತ್ಯೆ ಕೇಸ್‌ನಲ್ಲಿ ಸಾಕ್ಷಿ ನಾಶಕ್ಕೆ ಯತ್ನಿಸಿದ ಹಿನ್ನೆಲೆಯಲ್ಲಿ ಧಾರವಾಡ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ, ಮಾಜಿ ಸಚಿವ ವಿನಯ ಕುಲಕರ್ಣಿಯನ್ನು ಮೂರನೇ ಆರೋಪಿಯಾಗಿಸಿ ಉಪನಗರ ಠಾಣೆಯಲ್ಲಿ ಬುಧವಾರ ಎಫ್‌ಐಆರ್ ದಾಖಲಿಸಲಾಗಿದೆ.

ಸೋಮವಾರ ನಗರದ ಜೆಎಂಎಫ್‌ಸಿ ಪ್ರಧಾನ ನ್ಯಾಯಾಲಯ ನೀಡಿದ ಆದೇಶದ ಮೇರೆಗೆ ಐಪಿಸಿ 195ಎ ಕಲಂ ಅಡಿ ಪ್ರಕರಣ ದಾಖಲಾಗಿದೆ. ಇಲ್ಲಿ ಡಿವೈಎಸ್‌ಪಿ ತುಳಜಪ್ಪ ಸುಲ್ಫಿ ಮೊದಲ, ಡಿವೈಎಸ್‌ಪಿ ಚಂದ್ರಶೇಖರ 2ನೇ ಹಾಗೂ ಮಾಜಿ ಸಚಿವ ವಿನಯ ಕುಲಕರ್ಣಿ ಅವರನ್ನು ಮೂರನೇ ಆರೋಪಿಯನ್ನಾಗಿ ಮಾಡಲಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಯೋಗೀಶಗೌಡ ಕೊಲೆ ಪ್ರಕರಣದಲ್ಲಿ ಆರೋಪಿಗಳ ವಿರುದ್ಧ ಸಾಕ್ಷಿ ನುಡಿಯದಂತೆ ಕುಲಕರ್ಣಿ ಮತ್ತಿತರರು ಸಾಕ್ಷಿಗಳಿಗೆ ಬೆದರಿಕೆ ಹಾಕಿ ರಾಜೀಸಂಧಾನಕ್ಕೆ ಯತ್ನಿಸಿದ್ದಾರೆ ಎಂದು ಯೋಗೀಶಗೌಡ ಅವರ ಸಹೋದರ ಗುರುನಾಥಗೌಡ ಅರ್ಜಿ ಸಲ್ಲಿಸಿದ್ದರು.

2